Confederation of Indian Industry

| Headline | "Infrastructure is the key to boost Indian Economy":Bommai |
|---|---|
| **Publication** | Vaarth Bharathi |
| **Date** | 18.05.2022 |
| **Location** | Bangalore |

# ಮೂಲಸೌಲಭ್ಯ ಉದ್ಯಮ ದೊಡ್ಡ ಬದಲಾವಣೆ ತರಲಿದೆ

## ಸಿಎಂ ಬೊಮ್ಮಾಯಿ

ಬೆಂಗಳೂರು, ಮೇ 17: ಮೂಲಸೌಲಭ್ಯ ಉದ್ಯಮ ದೊಡ್ಡ ಬದಲಾವಣೆ ತರಲಿದೆ. ರಸ್ತೆ, ಗಣಿಗಾರಿಕೆ ಸೇತುವೆ ನಿರ್ಮಾಣ ಸೇರಿದಂತೆ ಎಲ್ಲ ವಲಯಗಳಲ್ಲಿ ಮೂಲಸೌಲಭ್ಯದಿಂದ ದೊಡ್ಡ ಬದಲಾವಣೆ ತರಬಹುದಾಗಿದ್ದು, ಇದಕ್ಕಾಗಿ ಅತ್ಯಾಧುನಿಕ ತಂತ್ರಜ್ಞಾನದ ಬಳಕೆ, ಯಂತ್ರೋಪಕರಣಗಳು ಬಂದಿವೆ. ಇವುಗಳನ್ನು ಸದುಪಯೋಗ ಮಾಡಿಕೊಳ್ಳಬೇಕು ಎಂದು ಉದ್ಯಮಿಗಳಿಗೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ.

ಬೆಂಗಳೂರಿನ ಬಿಐಇಸಿಯಲ್ಲಿ ಮಂಗಳವಾರದಿಂದ ಆರಂಭವಾದ ಕಟ್ಟಡ ನಿರ್ಮಾಣ ಸಲಕರಣೆಗಳ ಎಕ್ಸ್‌ಕಾನ್-2022 ಮತ್ತು ಪ್ರದರ್ಶನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಂಪೆನಿಗಳ ನಾವೀನ್ಯತೆ, ಹೊಸ ಚಿಂತನೆಗಳ ವಿಚಾರ ವಿನಿಮಯ ಮಾಡಿಕೊಳ್ಳಲು ಎಕ್ಸ್‌ಕಾನ್-2022 ಮತ್ತು ಪ್ರದರ್ಶನ ಸೂಕ್ತ ವೇದಿಕೆಯಾಗಿದೆ. ರಾಜ್ಯದಲ್ಲಿ ಹೂಡಿಕೆ ಮಾಡಲಿಚ್ಛಿಸುವ ಉದ್ದಿಮೆಗಳಿಗೆ ಸರಕಾರ ಎಲ್ಲ ರೀತಿಯ ಸಹಕಾರ ನೀಡಲಿದೆ. ಬಿಟಿಬಿಟಿ, ಸ್ಟಾರ್ಟ್ ಅಪ್, ಆರ್‌ಡಿಗಳಲ್ಲಿ ರಾಜ್ಯ ಮುಂಚೂಣಿಯಲ್ಲಿದೆ. ಈ ಅವಕಾಶವನ್ನು ಬಳಸಿಕೊಂಡು ಕಂಪೆನಿಗಳು ರಾಜ್ಯದಲ್ಲಿ ಬಂಡವಾಳ ಹೂಡುವ ಮೂಲಕ ರಾಜ್ಯ ಹಾಗೂ ದೇಶದ ಅಭಿವೃದ್ಧಿಗೆ ಕೊಡುಗೆ



ನೀಡಬೇಕು. ಕರ್ನಾಟಕದಲ್ಲಿ ಸರಕಾರಿ ಹಾಗೂ ಖಾಸಗಿ ಸ್ವಾಮ್ಯದ ಸಂಸ್ಥೆಗಳಿವೆ. ಬಿಎಚ್‌ಇಎಲ್, ಎಚ್‌ಎಎಲ್‌ನಂತಹ ಅನೇಕ ಬೃಹತ್ ಸಂಸ್ಥೆಗಳು ರಾಜ್ಯದಲಿದ್ದು, ರಾಜ್ಯದ ಎಕೋಸಿಸ್ಟಂ ಈ ಸಂಸ್ಥೆಗಳು ಕೊಡುಗೆ ನೀಡಿವೆ ಎಂದರು.

ರಾಜ್ಯದಲ್ಲಿ 400ಕ್ಕೂ ಹೆಚ್ಚು ಖಾಸಗಿ ಮತ್ತು ಸರಕಾರಿ ಸಂಶೋಧನಾ ಕೇಂದ್ರಗಳು ರಾಜ್ಯದಲ್ಲಿದ್ದು, ಅದರಲ್ಲಿ 180 ಬೆಂಗಳೂರಿನಲ್ಲಿದೆ. ಡಿಆರ್‌ಡಿಒ. ಸಂಸ್ಥೆ ರಾಜ್ಯಕ್ಕೆ ಕೊಡುಗೆ ನೀಡಿದೆ. ಸೌರಶಕ್ತಿ ಸಂಗ್ರಹಣೆ, ಸೆಮಿಕಂಡಕ್ಟರ್ ಕ್ಷೇತ್ರಕ್ಕೆ ರಾಜ್ಯ ಒತ್ತು ನೀಡುತ್ತಿದೆ. ಕರ್ನಾಟಕವನ್ನು ಅಂತರ್‌ರಾಷ್ಟ್ರೀಯ ಮಟ್ಟಕ್ಕೇರಿಸಲು ಸರ್ವ ಪ್ರಯತ್ನಗಳನ್ನು ಮಾಡಲಾಗುತ್ತಿದೆ ಎಂದರು.

> ಸಂಶೋಧನೆಗಳು ತಳಹಂತದಿಂದ ನಡೆಯಬೇಕು: ಹಣದಿಂದ ಹಣ ಬರುವುದಿಲ್ಲ. ದುಡಿಮೆಯಿಂದ ಹಣ ಬರುತ್ತದೆ. ದುಡಿಮೆಯ ತಳಹಂತದಲ್ಲಿರುವವರ ಬಗ್ಗೆ ಕಾಳಜಿ ವಹಿಸಬೇಕು. ತಳಹಂತದ ದುಡಿಯುವ ವರ್ಗಕ್ಕೆ ಸಹಾಯ ಮಾಡಲು ಹೊಸ ಚಿಂತನೆ ಮಾಡಬೇಕು. ಯೋಜನೆಯ ಪ್ರಾಯೋಗಿಕತೆ, ಸೃಜ್ಯತೆ ಬಗ್ಗೆ ತಿಳಿಯುವುದೇ ತಳಹಂತದಲ್ಲಿ. ಸಂಶೋಧನೆಗಳು ಈ ಹಂತದಲ್ಲಿ ನಡೆಯಬೇಕು. ಕರ್ನಾಟಕದಲ್ಲಿ ಸಣ್ಣ ಗ್ಯಾರೇಜಿನಿಂದ ಹಿಡಿದು ದೊಡ್ಡ ಕೈಗಾರಿಕೆಗಳವರೆಗೆ ಆರ್ ಎಂಡ್ ಡಿ ನೀತಿಯನ್ನು ಜಾರಿಗೊಳಿಸಲಾಗಿದೆ.
>
> । ಬಸವರಾಜ ಬೊಮ್ಮಾಯಿ, ಮುಖ್ಯಮಂತ್ರಿ